<u>ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ ಅಫಜಲಪೂರ</u>

<u>ಸಿಸಿ ನಂ.**899/2022**</u>

ಚಾಸಾ-10 ಫ್ರಾಸಾ-04

ಸತ್ಯ ಪ್ರತಿಜ್ಞೆಯ ಮೇರೆಗೆ ಪ್ರಮಾಣಿಕೃತ ಹೇಳಿಕೆ
ಪಡೆದುಕೊಳ್ಳಲಾಯಿತು.
ದಿನಾಂಕ:26.05.2025

| | | |
|---|---|---|
| ಹೆಸರು | : | ಶ್ರೀಮಂತ |
| ತಂದೆಯ ಹೆಸರು | : | ದೇವಿಂದ್ರಪ್ಪ |
| ವಯಸ್ಸು | : | 63 ವರ್ಷ |
| ಉದ್ಯೋಗ | : | ಒಕ್ಕಲುತನ |
| ವಾಸಸ್ಥಳ | : | ಮಲ್ಲಬಾದ ಗ್ರಾಮ |

-: <u>ಮುಖ್ಯ ವಿಚಾರಣೆ **:-** ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ **:-**</u>

ಚಾಸಾ-1 ನನ್ನ ಸೊಸೆ ಆಗಬೇಕು, ಅವರು ಈಗ ತೀರಿಕೊಂಡಿರುತ್ತಾರೆ. ಮೃತ ಪುಂಡಲಿಕ ನನ್ನ ಮಗನಾಗಬೇಕು. ಮೃತ ಶರಣಬಸಪ್ಪ ರವರ ಪರಿಚಯ ಇರುತ್ತದೆ.

ಸದರಿ ಮೃತ ಪುಂಡಲಿಕ ಮತ್ತು ಮೃತ ಶರಣಬಸಪ್ಪ ರಸ್ತೆ ಅಪಘಾತದಲ್ಲಿ ತೀರಿಕೊಂಡಿದ್ದು ಇರುತ್ತದೆ. ಸದರಿ ಅಪಘಾತದ ಬಗ್ಗೆ ಚಾಸಾ-8 ರವರು ತಿಳಿಸಿದ ನಂತರ ನಾವು ಗುನ್ನೆ ಸ್ಥಳಕ್ಕೆ ಹೋಗಿ ನೋಡಿದ್ದು ಇರುತ್ತದೆ. ಪೋಲಿಸರು ಪಂಚನಾಮೆಯನ್ನು ಮಾಡಿ ಶವವನ್ನು ನಮಗೆ ನೀಡಿರುತ್ತಾರೆ ಇಷ್ಟು ಹೊರತು ಪಡಸಿ ನನಗೆ ಈ ಪ್ರಕರಣದ ಬಗ್ಗೆ ಬೇರೆ ಮಾಹಿತಿ ಇಲ್ಲ. ನಾನು ಪೋಲಿಸರ ಮುಂದೆ ಯಾವುದೇ ಹೇಳಿಕೆ ನೀಡಿಲ್ಲ.

**(ಈ ಹಂತದಲ್ಲಿ ಸ.ಸ.ಅ ರವರು ಸಾಕ್ಷಿಯನ್ನು ಭಾಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲಿಗೆ ಅನುಮತಿ ಕೋರಿರುತ್ತಾರೆ, ಅನುಮತಿ ನೀಡಲಾಯಿತು)**

<u>ಪಾಟೀ ಸವಾಲುಃ ಸ.ಸ.ಅ. ರವರಿಂದ</u>

ದಿಃ 25.07.2020 ರಂದು ಬೆಳಗ್ಗೆ 07.35 ಕ್ಕೆ ನಾನು ಮನೆಯಲ್ಲಿ ಇದ್ದಾಗ ಚಾಸಾ-8 ರವರು ಬಂದು ನಿನ್ನೆಯ ದಿನ ರಾತ್ರಿ 08.30 ಕ್ಕೆ ದೇವಲ ಗಾಣಗಾಪೂರದ ಕಮಾನ ಗೇಟ ಹತ್ತಿರ ನಿಮ್ಮ ಮಗ ಪುಂಡಲಿಕ ಮತ್ತು ಆತನೊಂದಿಗೆ ಇದ್ದ ಶರಣಪ್ಪನಿಗೆ ರಸ್ತೆ ಅಪಘಾತವಾಗಿರುತ್ತದೆ ಎಂದು ತಿಳಿಸಿರುತ್ತಾರೆ ಎಂದರೆ ಸರಿ. ಮೋಟಾರ ಸೈಕಲ ವಾಹನ ಅಪಘಾತವಾಗಿ ಬಿದಿದ್ದು ಸದರಿ ಸ್ಥಳಕ್ಕೆ ಹೋಗಿ ನೋಡಿದಾಗ ಮೃತ ಪುಂಡಲಿಕ ಮತ್ತು ಶರಣಬಸಪ್ಪ ಶೆಟ್ಟಿರವರ ತಲೆಗೆ, ಮುಖಕ್ಕೆ, ಎಡಗಾಲಿಗೆ ರಕ್ತಗಾಯಗಳು ಆಗಿ ಸ್ಥಳದಲ್ಲಿ ಮೃತ ಪಟ್ಟಿರುತ್ತಾರೆ ಎಂದು ತಿಳಿಸಿರುತ್ತಾರೆ ಎಂದರೆ ಸರಿ. ಕಾರ ಚಾಲಕನು ಅತಿವೇಗ ಮತ್ತು ನಿಶ್ಕಾಳಜಿ ತನದಿಂದ ಅಪಘಾತವಾಗಿರುತ್ತದೆ ಎಂದು ಚಾಸಾ-8 ರವರು ನನಗೆ ತಿಳಿಸಿರುತ್ತಾರೆ ಎಂದರೆ ಸರಿ. ಕಾರ ನಂ.KA.28/D-3277 ನೇದ್ದರ ಚಾಲಕನ ಅತಿವೇಗ ಮತ್ತು ನಿಶ್ಕಾಳಜಿ ತನದಿಂದ ಮೃತ ನನ್ನ ಮಗ ಪುಂಡಲಿಕ ಮತ್ತು ಶರಣಪ್ಪ ಹೋಗುತ್ತಿದ್ದ ನಂಬರ ಪ್ಲೇಟ್ ಇಲ್ಲದ ಮೋಟಾರ ಸೈಕಲಗೆ ಬಂದು ಡಿಕ್ಕಿ ಪಡಿಸಿದ್ದರಿಂದ ಸದರಿ ಅಪಘಾತವಾಗಿದ್ದು ಇರುತ್ತದೆ ಎಂದು ನಾನು ಪೋಲಿಸರ ಮುಂದೆ ದಿಃ 25.07.2020 ರಂದು ಪೋಲಿಸರ ಮುಂದೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿ. ನನಗೆ ಅಪಘಾತ ಪಡಿಸಿದ ಕಾರ ಚಾಲಕನ ಹೆಸರು ಅನಿಲ ತಂದೆ ಶರಣಪ್ಪ ಜಾಧವ ಇರುತ್ತದೆ ಎಂದು ಪೋಲಿಸರಿಂದ ಕೇಳಿ ತಿಳಿದುಕೊಂಡಿರುತ್ತೇನೆ ಎಂದರೆ ಸರಿ.

ನನ್ನ ಮಗ ಪುಂಡಲಿಕ ಮತ್ತು ಶರಣಪ್ಪ ರವರು ಪ್ರಯಾಣಿಸುತ್ತಿದ್ದ ಮೋಟಾರ ಸೈಕಲನ ಭಾವಚಿತ್ರಗಳನ್ನು ಸಾಕ್ಷಿಗೆ ತೋರಿಸಿದ್ದು, ಸಾಕ್ಷಿಯು ಅವುಗಳನ್ನು ನೋಡಿ ಗುರುತಿಸಿದ್ದು, ಅವುಗಳನ್ನು ನಿಪಿ-**3** ರಿಂದ **5** ಎಂದು ಗುರುತಿಸಲಾಯಿತು. ಸಾಕ್ಷಿಗೆ ಅಪಘಾತಪಡಿಸಿತ್ತು ಎಂದು ಹೇಳುವ ಕಾರಿನ ಭಾವಚಿತ್ರಗಳನ್ನು ಸಾಕ್ಷಿಗೆ ತೋರಿಸಿದ್ದು, ಸಾಕ್ಷಿಯು ಅವುಗಳನ್ನು ನೋಡಿ ಗುರುತಿಸಿದ್ದು, ಅವುಗಳನ್ನು ನಿಪಿ-**6** ರಿಂದ **9** ಎಂದು ಗುರುತಿಸಲಾಯಿತು. ಆರೋಪಿಯನ್ನು ನೋಡಿ ಗುರುತಿಸಿರುತ್ತೀರಾ ಎಂಬ ಪ್ರಶ್ನೆಗೆ ಸಾಕ್ಷಿಯು ನನಗೆ ಅಪ್ಪೊಂದು ಗುರುತಾವುದಿಲ್ಲ ಎಂದು ನುಡಿಯುತ್ತಾರೆ.

<u>ಪಾಟೀ ಸವಾಲುಃ ಆರೋಪಿ ಪರ ಶ್ರೀ **RSH** ವಕೀಲರಿಂದಃ-</u>

ನಾನು ನೀಡಿದ ಹೇಳಿಕೆಯನ್ನು ಪೋಲಿಸರು ಬರೆದುಕೊಂಡು ನನಗೆ ಓದಿ ಹೇಳಿಲ್ಲಾ ಎಂದರೆ ಸಾಕ್ಷಿಯು ನನಗೆ ಗೊತ್ತಾಗುವುದಿಲ್ಲ ಎಂದು ನುಡಿಯುತ್ತಾರೆ. ನನ್ನ ಹೇಳಿಕೆ ನೀಡುವ ಸಮಯದಲ್ಲಿ ಅಪಘಾತ ಪಡಿಸಿದ ಕಾರಿನ ನಂಬರ ತಿಳಿಸಿರುವುದಿಲ್ಲಾ ಎಂದರೆ ಸರಿ. ಅಪಘಾತ ಪಡಿಸಿದ ಚಾಲಕನ ಹೆಸರು ನನಗೆ ತಿಳಿಸಿಲ್ಲ ಎಂದರೆ ಸರಿ. ರಸ್ತಿ ಅಪಘಾತವಾಗಿದ್ದರಿಂದ ಪೋಲಿಸರು ಒಂದು ಸಹಿ ಮಾಡು ಅಂತಾ ಹೇಳಿದ್ದರಿಂದ ನಾನು ಸಹಿ ಮಾಡಿರುತ್ತೇನೆ ಎಂದರೆ ಸರಿ. ಸರಕಾರಿ ವಕೀಲರು ಸೂಚಿಸಿದ ಪ್ರಶ್ನೆಗಳಿಗೆ ನಾನು ಸರಿ ಎಂದು ಉತ್ತರ ನೀಡಿದ್ದು ಸದರಿ ವಿಷಯವು ನನಗೆ ಗೊತ್ತಿಲ್ಲ ಎಂದರೆ ಸರಿ.

<u>ಮರು ವಿಚಾರಣೆಃ - ಇಲ್ಲ.</u>

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ

ಸಿವಿಲ್ & ಪ್ರ.ದ.ನ್ಯಾ. ದಂಡಾಧಿಕಾರಿಗಳು
ಅಫಜಲಪೂರ

<u>ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ ಅಫಜಲಪೂರ</u>

<u>ಸಿಸಿ ನಂ.**899/2022**</u>

ಚಾಸಾ-03 ಫ್ರಾಸಾ-03

ಸತ್ಯ ಪ್ರತಿಜ್ಞೆಯ ಮೇರೆಗೆ ಪ್ರಮಾಣಿಕೃತ ಹೇಳಿಕೆ
ಪಡೆದುಕೊಳ್ಳಲಾಯಿತು.
ದಿನಾಂಕ:26.05.2025

| | | |
|---|---|---|
| ಹೆಸರು | : | ಶರಣಪ್ಪ |
| ತಂದೆಯ ಹೆಸರು | : | ಚಂದ್ರಶಾ |
| ವಯಸ್ಸು | : | 48 ವರ್ಷ |
| ಉದ್ಯೋಗ | : | ಒಕ್ಕಲುತನ |
| ವಾಸಸ್ಥಳ | : | ಮಲ್ಲಬಾದ ಗ್ರಾಮ |

-: <u>ಮುಖ್ಯ ವಿಚಾರಣೆ **:-** ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ **:-**</u>

ಚಾಸಾ-1, 2 ರವರ ಪರಿಚಯ ಇರುತ್ತದೆ. ಮೃತ ಪುಂಡಲಿಕ ರವರ ಪರಿಚಯ ಇರುತ್ತದೆ. ಸಾಕ್ಷಿಗೆ ಶವ ಪಂಚನಾಮೆಯ ಪ್ರತಿಯನ್ನು ತೋರಿಸಿದ್ದು, ಸಾಕ್ಷಿಯು ಅದನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿಪಿ-2 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ-**2**(ಬಿ) ಎಂದು ಗುರುತಿಸಲಾಯಿತು. ನಿಪಿ-2 ರ ಮೇಲೆ ಸಹಿಯನ್ನು ದೇವಲ ಗಾಣಗಾಪೂರ ಪೋಲಿಸ ಠಾಣೆಯಲ್ಲಿ ಪೋಲಿಸರು ಸಹಿ ಮಾಡು ಅಂತಾ ತಿಳಿಸಿದ್ದರಿಂದ ನಾನು ಸಹಿ ಮಾಡಿರುತ್ತೇನೆ. ಈ ಪ್ರಕರಣದ ಕುರಿತು ನನಗೆ ಯಾವುದೇ ಮಾಹಿತಿ ಇಲ್ಲ.

**(**ಈ ಹಂತದಲ್ಲಿ ಸ.ಸ.ಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲಿಗೆ ಅನುಮತಿ ಕೋರಿರುತ್ತಾರೆ**,** ಅನುಮತಿ ನೀಡಲಾಯಿತು)

<u>ಪಾಟೀ ಸವಾಲುಃ ಸ.ಸ.ಅ. ರವರಿಂದ</u>

ದಿಃ 25.07.2020 ರಂದು ಗೊಬ್ಬರ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಮೃತ ಪುಂಡಲಿಕ ರವರ ಶವ ಪಂಚನಾಮೆಯನ್ನು ನನ್ನ ಹಾಗೂ ಚಾಸಾ-2 ರವರ ಸಮಕ್ಷಮ ಮಾಡಿರುತ್ತಾರೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲುಃ ಆರೋಪಿ ಪರ ಶ್ರೀ **RSH** ವಕೀಲರಿಂದಃ-</u>

ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲಾ ಎಂದು ನುಡಿದಿರುತ್ತಾರೆ.

<u>ಮರು ವಿಚಾರಣೆಃ - ಇಲ್ಲ.</u>

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ

ಸಿವಿಲ್ & ಪ್ರ.ದ.ನ್ಯಾ. ದಂಡಾಧಿಕಾರಿಗಳು
ಅಫಜಲಪೂರ

## ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ ಅಫಜಲಪೂರ

**ಸಿಸಿ ನಂ.899/2022**

ಚಾಸಾ-02 ಪ್ರಾಸಾ-02

ಸತ್ಯ ಪ್ರತಿಜ್ಞೆಯ ಮೇರೆಗೆ ಪ್ರಮಾಣಿಕೃತ ಹೇಳಿಕೆ
ಪಡೆದುಕೊಳ್ಳಲಾಯಿತು.
ದಿನಾಂಕ:26.05.2025

| | | |
|---|---|---|
| ಹೆಸರು | : | ಲಕ್ಕಪ್ಪ |
| ತಂದೆಯ ಹೆಸರು | : | ಶರಣಪ್ಪ |
| ವಯಸ್ಸು | : | 46 ವರ್ಷ |
| ಉದ್ಯೋಗ | : | ಒಕ್ಕಲುತನ |
| ವಾಸಸ್ಥಳ | : | ಮಲ್ಲಬಾದ ಗ್ರಾಮ |

-: ಮುಖ್ಯ ವಿಚಾರಣೆ **:-** ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ **:-**

ಚಾಸಾ-3 ರವರ ಪರಿಚಯ ಇರುತ್ತದೆ. ಚಾಸಾ-1 ನನ್ನ ಸೊಸೆ ಆಗಬೇಕು, ಅವರು ಈಗ ತೀರಿಕೊಂಡಿರುತ್ತಾರೆ. ಮೃತ ಪುಂಡಲಿಕ ನನ್ನ ಅಣ್ಣನ ಮಗನಾಗಬೇಕು. ಸಾಕ್ಷಿಗೆ ಶವ ಪಂಚನಾಮೆಯ ಪ್ರತಿಯನ್ನು ತೋರಿಸಿದ್ದು, ಸಾಕ್ಷಿಯು ಅದನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-**2** ಎಂದು ಮತ್ತು ಸಾಕ್ಷಿಯ ಸಹಿಯನ್ನು ನಿಪಿ-**2**(ಎ) ಎಂದು ಗುರುತಿಸಲಾಯಿತು. ಈ ಪ್ರಕರಣದ ಕುರಿತು ನನಗೆ ಯಾವುದೇ ಮಾಹಿತಿ ಇಲ್ಲ.

**(ಈ ಹಂತದಲ್ಲಿ ಸ.ಸ.ಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲಿಗೆ ಅನುಮತಿ ಕೋರಿರುತ್ತಾರೆ, ಅನುಮತಿ ನೀಡಲಾಯಿತು)**

ಪಾಟೀ ಸವಾಲುಃ ಸ.ಸ.ಅ. ರವರಿಂದ

ದಿಃ 25.07.2020 ರಂದು ಗೊಬ್ಬುರ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಮೃತ ಪುಂಡಲಿಕ ರವರ ಶವ ಪಂಚನಾಮೆಯನ್ನು ನನ್ನ ಹಾಗೂ ಚಾಸಾ-3 ರವರ ಸಮಕ್ಷಮ ಮಾಡಿರುತ್ತಾರೆ ಎಂದರೆ ಸರಿ.

<u>ಪಾಟೀ ಸವಾಲುಃ ಆರೋಪಿ ಪರ ಶ್ರೀ **RSH** ವಕೀಲರಿಂದಃ-</u>

ನಿಪಿ-2 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ ಎಂದರೆ ಸರಿ. ಪೋಲಿಸರು ಸಹಿ ಮಾಡು ಅಂತಾ ತಿಳಿಸಿದ್ದರಿಂದ ಸಹಿ ಮಾಡಿರುತ್ತೇನೆ ಎಂದರೆ ಸರಿ.

<u>ಮರು ವಿಚಾರಣೆಃ - ಇಲ್ಲ.</u>

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ

ಸಿವಿಲ್ & ಪ್ರ.ದ.ನ್ಯಾ ದಂಡಾಧಿಕಾರಿಗಳು
ಅಫಜಲಪೂರ

## ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ ಅಫಜಲಪೂರ

**ಸಿಸಿ ನಂ.899/2022**

ಚಾಸಾ-12 ಪ್ರಾಸಾ-01

ಸತ್ಯ ಪ್ರತಿಜ್ಞೆಯ ಮೇರೆಗೆ ಪ್ರಮಾಣಿಕೃತ ಹೇಳಿಕೆ ಪಡೆದುಕೊಳ್ಳಲಾಯಿತು.
ದಿನಾಂಕ:26.05.2025

| | | |
|---|---|---|
| ಹೆಸರು | : | ಅಂಬಿಕಾ |
| ಗಂಡನ ಹೆಸರು | : | ಶರಣಬಸಪ್ಪ |
| ವಯಸ್ಸು | : | 35 ವರ್ಷ |
| ಉದ್ಯೋಗ | : | ಖಾಸಗಿ ಕೆಲಸ |
| ವಾಸಸ್ಥಳ | : | ಮಲ್ಲಬಾದ ಗ್ರಾಮ |

-: ಮುಖ್ಯ ವಿಚಾರಣೆ :- ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ :-

ಚಾಸಾ-1 ರವರ ಪರಿಚಯ ಇರುತ್ತದೆ, ಅವರು ಈಗ ತೀರಿಕೊಂಡಿರುತ್ತಾರೆ. ಚಾಸಾ-9 ರಿಂದ 11 ರವರ ಪರಿಚಯ ಇರುವುದಿಲ್ಲ. ಮೃತ ಪುಂಡಲಿಕ ರವರ ಪರಿಚಯ ಇರುತ್ತದೆ. ಮೃತ ಶರಣಬಸಪ್ಪ ನನ್ನ ಗಂಡನಾಗಬೇಕು.

ನನ್ನ ಗಂಡ ಮತ್ತು ಮೃತ ಪುಂಡಲಿಕ ಹೇಗೆ ತೀರಿಕೊಂಡಿರುತ್ತಾರೆ ಎಂದು ನನಗೆ ಗೊತ್ತಿಲ್ಲ, ಯಾರೋ ಒಬ್ಬರು  ಗಂಡ ಮತ್ತು ಮೃತ ಪುಂಡಲಿಕ ರವರನ್ನು ಆಸ್ಪತ್ರೆಯಲ್ಲಿ ದಾಖಲಿಸಿದ್ದ ಕುರಿತು ವಿಷಯ ತಿಳಿಸಿದ್ದರಿಂದ ನಾನು ಆಸ್ಪತ್ರೆಗೆ ಹೋಗುವಷ್ಟರಲ್ಲಿ ಅವರು ಇಬ್ಬರು ತೀರಿಕೊಂಡಿರುತ್ತಾರೆ. ಅವರು ಹೇಗೆ ತೀರಿಕೊಂಡಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ಸದರಿಯವರು ಒಂದು ದಿನ ಮೋಟಾರ ಸೈಕಲ ಮೇಲೆ ಹೋಗುತ್ತಿರುವಾಗ ಅಪಘಾತವಾಗಿರುತ್ತದೆ ಎಂದು ಗೊತ್ತಾಗಿರುತ್ತದೆ, ಆದರೆ ಅಪಘಾತವು ಹೇಗೆ ಮತ್ತು ಯಾರ ತಪ್ಪಿನಿಂದ ಆಗಿರುತ್ತದೆ ಎಂದು ನನಗೆ ಗೊತ್ತಿಲ್ಲ. ನನಗೆ ಈ ಪ್ರಕರಣದ ಕುರಿತು ಯಾವುದೇ ಮಾಹಿತಿ ಇಲ್ಲ. ನಾನು ಪೋಲಿಸರ ಮುಂದೆ ಯಾವುದೇ ಹೇಳಿಕೆ ನೀಡಿಲ್ಲ.

(ಈ ಹಂತದಲ್ಲಿ ಸ.ಸ.ಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲಿಗೆ ಅನುಮತಿ ಕೋರಿರುತ್ತಾರೆ, ಅನುಮತಿ ನೀಡಲಾಯಿತು)

ಪಾಟೀ ಸವಾಲುಃ ಸ.ಸ.ಅ. ರವರಿಂದ

ದಿಃ 25.07.2020 ರಂದು ಬೆಳಗ್ಗೆ 07.35 ಕ್ಕೆ ನಾನು ಮತ್ತು ನನ್ನ ಅತ್ತೆ ನಮ್ಮ ಮನೆಯಲ್ಲಿ ಇದ್ದಾಗ ಚಾಸಾ-1 ರವರು ತಿಳಿಸಿದ್ದೇನೆಂದರೆ, ದಿಃ 25.07.2020 ರಂದು ರಾತ್ರಿ 07.30 ಕ್ಕೆ ಚೌಡಾಪೂರಕ್ಕೆ ಹೊರಟಿದ್ದಾಗ ದೇವಲ ಗಾಣಗಾಪೂರದ ಕಮಾನ ಗೇಟ ಹತ್ತಿರ ಒಂದು ನಂಬರ ಪ್ಲೇಟ್ ಇಲ್ಲದ ಮೋಟಾರ ಸೈಕಲ ವಾಹನ ಅಪಘಾತವಾಗಿ ಬಿದಿದ್ದು ಸದರಿ ಸ್ಥಳಕ್ಕೆ ಹೋಗಿ ನೋಡಿದಾಗ ಮೃತ ಪುಂಡಲಿಕ ಮತ್ತು ಶರಣಬಸಪ್ಪ ಶೆಟ್ಟಿರವರ ತಲೆಗೆ, ಮುಖಕ್ಕೆ, ಎಡಗಾಲಿಗೆ ರಕ್ತಗಾಯಗಳು ಆಗಿ ಸ್ಥಳದಲ್ಲಿ ಮೃತ ಪಟ್ಟಿರುತ್ತಾರೆ ಎಂದು ತಿಳಿಸಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ಸದರಿ ವಿಷಯ ಗೊತ್ತಾದ ಕೂಡಲೆ ನಾನು ಮತ್ತು ನಮ್ಮೂರಿನ ಇತರರು ಘಟನಾ ಸ್ಥಳಕ್ಕೆ ಹೋಗಿ ನೋಡಿರುತ್ತೇವೆ ಎಂದರೆ ಸರಿಯಲ್ಲ. ಆ ನಂತರ ಮೃತ ಪುಂಡಲಿಕನ ಸಂಬಂಧಿಕರು ಸಹ ಘಟನಾ ಸ್ಥಳಕ್ಕೆ ಬಂದಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಅಪಘಾತವು ಒಬ್ಬ ಕಾರ ಚಾಲಕನು ಅತಿವೇಗ ಮತ್ತು ನಿಶ್ಕಾಳಜಿ ತನದಿಂದ ಕಾರು ಚಲಾಯಿಸಿಕೊಂಡು ಬಂದು ಮೃತರ ಮೋಟಾರ ಸೈಕಲ ಓವಟ ಟೇಕ ಮಾಡಿ ಹೋಗುತ್ತಿರುವಾಗ ಜೋರಾಗಿ ಡಿಕ್ಕಿ ಪಡಿಸಿ ಅಪಘಾತಪಡಿಸಿರುತ್ತಾನೆ ಎಂದು ಚಾಸಾ-8 ರವರು ತಿಳಿಸಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಅಪಘಾತವು ಕಾರ ಚಾಲಕ ನಡೆಸುತ್ತಿದ ಕಾರ ನಂ.KA.28/D-3277 ಇರುತ್ತದೆ ಎಂದರೆ ನನಗೆ ಗೊತ್ತಿಲ್ಲ. ಸದರಿ ಅಪಘಾತವು ಕಾರ ಚಾಲಕನ ಅತಿವೇಗ ಮತ್ತು ನಿಶ್ಕಾಳಜಿ ತನದಿಂದ ಆಗಿರುತ್ತದೆ ಎಂದು ದಿಃ 25.07.2020 ರಂದು ಪೋಲಿಸರ ಮುಂದೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ನಿರಾಕರಿಸಿದ ಹೇಳಿಕೆಯನ್ನು ನಿಪಿ-**1** ಎಂದು ಗುರುತಿಸಲಾಯಿತು.

<u>ಪಾಟೀ ಸವಾಲುಃ ಆರೋಪಿ ಪರ ಶ್ರೀ **RSH** ವಕೀಲರಿಂದಃ-</u>

ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲಾ ಎಂದು ನುಡಿದಿರುತ್ತಾರೆ.

<u>ಮರು ವಿಚಾರಣೆಃ - ಇಲ್ಲ.</u>

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)
ಓ ಹೇ ಕೇ ಸರಿ ಇದೆ

ಸಿವಿಲ್ & ಪ್ರ.ದ.ನ್ಯಾ ದಂಡಾಧಿಕಾರಿಗಳು
ಅಫಜಲಪೂರ